| |
|---|
| **Deposition Sheets (RP.No.57) Form No.4** |

**IN THE COURT OF PRL. CIVIL JUDGE & J.M.F.C., KARKALA.**

**Criminal Case No. 536/2024**

ಪಿ.ಡಬ್ಲ್ಯು : 12 ಸಿ.ಡಬ್ಲ್ಯು : 12

ಸಾಕ್ಷಿದಾರನ ಹೆಸರು : ಉಮೇಶ್ ಪೂಜಾರಿ
ತಂದೆಯ ಹೆಸರು : ಅಣ್ಣಿ ಪೂಜಾರಿ
ಪ್ರಾಯ : 49 ವರ್ಷ
ಉದ್ಯೋಗ : ಅಟೋ ಚಾಲಕ
ವಾಸ : ಮಾಳ

ದಿನಾಂಕ 06-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರುಃ-**

ಚಾಸಾ-5 ಮತ್ತು ಚಾಸಾ-13 ರವರ ಪರಿಚಯ ಇರುವುದಿಲ್ಲ.

ನನ್ನ ಸಮಕ್ಷಮ ಪೋಲಿಸರು ಯಾವುದೇ ಸ್ಥಳ ಮಹಜರು ಆಗಲೀ ನಕಾಶೆಯಾಗಲೀ ತಯಾರಿಸಿರುವುದಿಲ್ಲ. ಮಹಜರು ಸಮಯದಲ್ಲಿ ಬೇರೆ ಯಾರು ಹಾಜರಿದ್ದರು ಎಂದು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಾಹನವನ್ನು ಸ್ವಾಧೀನಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಯು ಸ್ಥಳ ಮಹಜರ್ ಹಾಗೂ ನಕಾಶೆಯಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸ್ಸಿದ್ದು, ಸ್ಥಳ ಮಹಜರನ್ನು ಈಗಾಗಲೇ ನಿಪಿ-6 ಎಂದು, ನಕಾಶೆಯನ್ನು ನಿಪಿ-7 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಗಳನ್ನು ನಿಪಿ-6(ಸಿ), ನಿಪಿ-7(ಸಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಗಳನ್ನು ಠಾಣೆಯಲ್ಲಿ ಮಾಡಿದ್ದು, ಯಾವ ವಿಚಾರಕ್ಕಾಗಿ ಮಾಡಿರುತ್ತೇನೆ ಎಂದು ಈಗ ನೆನಪಿಲ್ಲ. ಸಾಕ್ಷಿಯು ಮಹಜರು ಸಮಯದಲ್ಲಿ ತೆಗೆದ ಭಾವಚಿತ್ರ ಹಾಗೂ ಬಸ್ಸಿನ ಭಾವಚಿತ್ರವನ್ನು ನೋಡಿ ಗುರುತಿಸಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸಸಅ ರವರು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು)

ಪಾಟೀ ಸವಾಲು ಃ ಸಹಾಯಕ ಸರ್ಕಾರಿ ಅಭಿಯೋಜಕರುಃ-

ದಿಃ 21-12-2023 ರಂದು ಪೋಲಿಸರು ಚಾಸಾ-5 ರವರು ತೋರಿಸಿಕೊಟ್ಟಂತೆ ಕಾರ್ಕಳ ತಾಲೂಕು, ಮಾಳ ಗ್ರಾಮದ, ಶೃಂಗೇರಿ-ಬಜಗೋಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ನನ್ನ ಹಾಗೂ ಚಾಸಾ-13 ರವರ ಸಮಕ್ಷಮ ಸ್ಥಳ ಮಹಜರು, ನಕಾಶೆಯನ್ನು ಬೆಳ್ಳಿಗ್ಗೆ 10.00 ಗಂಟೆಯಿಂದ 10.45 ಗಂಟೆಯವರೆಗೆ ತಯಾರಿಸಿ, ಅಪಘಾತಕ್ಕೆ ಸಂಬಂಧಿಸಿದ ನಿಪಿ-2 ರಲ್ಲಿ ಕಾಣುವ ಕೆ.ಎಸ್.ಆರ್.ಟಿ.ಸಿ ಬಸ್ಸನ್ನು ಸ್ವಾಧೀನಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಃ ಆರೋಪಿ ಪರ ಃ ಶ್ರೀ. ಎಮ್.ಐ. ವಕೀಲರಿಂದ ಃ ಏನೂ ಇಲ್ಲ.

ಮರುವಿಚಾರಣೆ ಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಕಾರ್ಕಳ